VIJAYAVANI » MYSURU

ನಂ. 1 ಕನ್ನಡ ದಿನಪತ್ರಿಕೆ

ವಿಜಯವಾಣಿ

# ರೈಲ್ವೆ ಮಾರ್ಗಕ್ಕೆ ಅನುಮತಿ ನೀಡಲ್ಲ

## ಕೇಂದ್ರ ರೈಲ್ವೆ ಸಚಿವ ಪಿಯೂಷ್ ಗೋಯಲ್ ಭರವಸೆ | ಪರಿಸರವಾದಿಗಳಿಂದ ಮನವಿ

■ ವಿಜಯವಾಣಿ ಸುದ್ದಿಜಾಲ ಮಡಿಕೇರಿ

ಮೈಸೂರು-ತಲಚೇರಿ ನಡುವಿನ ರೈಲ್ವೆ ಮಾರ್ಗಕ್ಕೆ ಅನುಮತಿ ನೀಡುವುದಿಲ್ಲ ಎಂದು ಕೊಡಗು ಏಕೀಕರಣ ರಂಗ ಮತ್ತು ವೈಲ್ಡ್ ಲೈಫ್ ಫಸ್ಟ್ ನಿಯೋಗಕ್ಕೆ ಕೇಂದ್ರ ರೈಲ್ವೆ ಸಚಿವ ಪಿಯೂಷ್ ಗೋಯಲ್ ಭರವಸೆ ನೀಡಿದ್ದಾರೆ.

ಹೊಸದಿಲ್ಲಿಯ ರೈಲ್ ಭವನದಲ್ಲಿ ಕೇಂದ್ರದ ರೈಲ್ವೆ ಖಾತೆ ಸಚಿವ ಪಿಯೂಷ್ ಗೋಯಲ್ ಅವರನ್ನು ಭೇಟಿ ಮಾಡಿ ಮೈಸೂರು- ತಲಚೇರಿ ನಡುವಿನ ರೈಲ್ವೆ ಮಾರ್ಗವನ್ನು ಪರಿಸರ ಸೂಕ್ಷ್ಮ ಪ್ರದೇಶವಾದ ಕೊಡಗು ಜಿಲ್ಲೆ ಮೂಲಕ ಅನುಷ್ಠಾನಗೊಳಿಸದಿರುವಂತೆ ಕೋರಿ ಮನವಿ ಪತ್ರ ಸಲ್ಲಿಸಲಾಯಿತು.

ರೈಲ್ವೆ ಸಚಿವಾಲಯಕ್ಕೆ ಪ್ರಸ್ತಾಪಿತ ಮೈಸೂರು- ತಲಚೇರಿ ನಡುವಿನ ರೈಲ್ವೆ ಮಾರ್ಗದ ಅನುಷ್ಠಾನದಿಂದ ಪರಿಸರ ಮತ್ತು ವನ್ಯಜೀವಿಗಳ ಮೇಲಾಗುವ ಪರಿಣಾಮಗಳ ಸ್ಪಷ್ಟ ಅರಿವಿದ್ದು, ಈ ರೀತಿಯ ಪ್ರಸ್ತಾಪಕ್ಕೆ ಅನುಮತಿ ನೀಡುವ ಪ್ರಶ್ನೆಯೇ ಉದ್ಭವಿಸುವುದಿಲ್ಲ ಎಂದು ಕೇಂದ್ರ ಸಚಿವರು ಭರವಸೆ ನೀಡಿದರು.



ಮೈಸೂರು-ತಲಚೇರಿ ರೈಲ್ವೆ ಮಾರ್ಗಕ್ಕೆ ಅನುಮತಿ ನೀಡದಂತೆ ಪರಿಸರವಾದಿಗಳು ಕೇಂದ್ರ ರೈಲ್ವೆ ಸಚಿವ ಪಿಯೂಷ್ ಗೋಯಲ್‌ಗೆ ಹೊಸದಿಲ್ಲಿಯಲ್ಲಿರುವ ರೈಲ್ ಭವನದಲ್ಲಿ ಸೋಮವಾರ ಮನವಿ ಪತ್ರ ಸಲ್ಲಿಸಿದರು.

ಈ ಪ್ರಸ್ತಾವನೆಯಿಂದ ಎದುರಾಗ ಬಹುದಾದ ಸಮಸ್ಯೆ ಮನಗಂಡು 1960 ರಿಂದಲೇ ಈ ಪ್ರಸ್ತಾವನೆ ತಡೆಹಿಡಿಯಲಾಗಿದೆ. ಜಲಮೂಲಗಳ ಸಂರಕ್ಷಣೆ ದೃಷ್ಟಿಯಿಂದ ಮತ್ತು ಅತಿ ಹೆಚ್ಚು ವನ್ಯಜೀವಿ ಸಾಂದ್ರತೆ ಇರುವ ಈ ಪ್ರದೇಶದಲ್ಲಿ ರೈಲ್ವೆ ಮಾರ್ಗವನ್ನು ರೂಪಿಸಿದಲ್ಲಿ ಈಶಾನ್ಯ ಭಾರತದಂತೆ ಆನೆಗಳ ಸಂತತಿಗೆ ಅಪಾಯ ಉಂಟಾಗುವ ಸಾಧ್ಯತೆ ಇರು ವುದರಿಂದ ಈ ಯೋಜನೆಗೆ ಅನುಮತಿ ನೀಡುವುದಿಲ್ಲ ಎಂಬ ಭರವಸೆ ನೀಡಿದರು.

ಕೊಡಗು ಜಿಲ್ಲೆಯ ಅರಣ್ಯ ಪ್ರದೇಶ ದಕ್ಷಿಣ ಭಾರತದ ಜೀವನದಿ ಕಾವೇರಿಯ ಪ್ರಮುಖ ಜಲಮೂಲ ಎಂಬುದನ್ನು, ಈ ಪ್ರದೇಶ ಏಷ್ಯಾದ ಕಾಡಾನೆಗಳ ಅಳಿದುಳಿದ ಆವಾಸ ಎಂಬುದನ್ನು, ದಕ್ಷಿಣ ಕರ್ನಾಟಕ ಮತ್ತು ಉತ್ತರ ಕೇರಳದ ನಡುವೆ ಇರುವ ಸಮರ್ಪಕ ರಸ್ತೆ ಸಂಪರ್ಕ ಜಾಲದ ಬಗ್ಗೆ ಮತ್ತು ಮೈಸೂರು-ಹಾಸನ-ಮಂಗಳೂರು- ತಲಚೇರಿ ನಡುವಿನ ರೈಲ್ವೆ ಮಾರ್ಗದ ಬಗ್ಗೆ ನಿಯೋಗ ಸಚಿವರ ಗಮನ ಸೆಳೆಯಿತು.

ನಿಯೋಗದಲ್ಲಿ ವೈಲ್ಡ್‌ಲೈಫ್ ಫಸ್ಟ್ ಸಂಘಟನೆಯ ಕೆ.ಎಂ.ಚಿಣ್ಣಪ್ಪ, ಪ್ರವೀಣ್ ಭಾರ್ಗವ್, ಎಚ್.ಎನ್.ಎ.ಪ್ರಸಾದ್, ಕೊಡಗು ಏಕೀಕರಣ ರಂಗದ ಎ.ಎ. ತಮ್ಮು ಪೂವಯ್ಯ ಇದ್ದರು.